ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ದಿನಾಂಕ : 24-10-2014

# ವೈದ್ಯಾಧಿಕಾರಿಗಳ ನ್ಯಾಯ ಸಮ್ಮತ ಬೇಡಿಕೆ ಈಡೇರಿಕೆಗೆ ಸರ್ಕಾರ ಸಿದ್ಧ: ಆರೋಗ್ಯ ಸಚಿವ ಯು.ಟಿ. ಖಾದರ್

ಬೆಂಗಳೂರು, ಅ. 24 (ಕರ್ನಾಟಕ ವಾರ್ತೆ)-

ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘವು ಮುಂದಿಟ್ಟಿರುವ ಬೇಡಿಕೆಗಳಲ್ಲಿ ನ್ಯಾಯ ಸಮ್ಮತವಾದ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಸಿದ್ಧವಿದೆ. ವೈದ್ಯಾಧಿಕಾರಿಗಳ ಸಮಸ್ಯೆಗಳನ್ನು ಮುಕ್ತವಾಗಿ ಚರ್ಚಿಸಿ ಬಗೆಹರಿಸಲು ಯತ್ನಿಸಲಾಗುವುದು. ಜನಸಾಮಾನ್ಯರು ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶ್ರೀ ಯು.ಟಿ. ಖಾದರ್ ಅವರು ತಿಳಿಸಿದರು.

ಇಂದು ತಮ್ಮ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜನಸಾಮಾನ್ಯರಿಗೆ ರೋಗಿಗಳಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುವುದು. ಜನರ ಬಗ್ಗೆ ಕಾಳಜಿ ಇರುವ ವೈದ್ಯಾಧಿಕಾರಿಗಳು ಅವರಿಗೆ ತೊಂದರೆಯಾಗುವಂತೆ ನಡೆದುಕೊಳ್ಳಲಾರರು ಎಂಬ ವಿಶ್ವಾಸ ವ್ಯಕ್ತ ಪಡಿಸಿದರು.

ಕರ್ನಾಟಕ ಸರ್ಕಾರ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ಬೇಡಿಕೆಗಳ ಕುರಿತು ವಿವರಿಸಿದ ಸಚಿವರು, ವೈದ್ಯರ ವೇತನ ಪರಿಷ್ಕರಣೆ, ಸಮರ್ಪಕ ಔಷಧ ಪೂರೈಕೆ, ವೇತನ-ಭತ್ಯೆ ಸಕಾಲದಲ್ಲಿ ನೀಡುವುದಕ್ಕೆ ಸರ್ಕಾರದ ಸಹಮತಿ ಇದೆ. ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಜೊತೆಗೆ ಇಲಾಖೆಯಲ್ಲಿ ಖಾಲಿ ಇರುವ ವೈದ್ಯಕೀಯ ಹಾಗೂ ಅರೆ ವೈದ್ಯಕೀಯ ಮತ್ತು ಇತರ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ವರ್ಗಾವಣೆ ನೀತಿ ತಿದ್ದುಪಡಿ ಹಾಗೂ ವೈದ್ಯಕೀಯ ಕೈಪಿಡಿ ರಚನೆಗೂ ಸರ್ಕಾರ ಸಿದ್ಧವಿದ್ದು ವೈದ್ಯಾಧಿಕಾರಿಗಳು ಈ ಬಗ್ಗೆ ಸಲಹೆಗಳನ್ನು ನೀಡಿದಲ್ಲಿ ಜನರ ಹಿತದೃಷ್ಟಿಯಿಂದ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ನುಡಿದರು.

ಜಿಲ್ಲಾ ಆಸ್ಪತ್ರೆಗಳನ್ನು ಆರೋಗ್ಯ ಇಲಾಖೆಯಲ್ಲೇ ಉಳಿಸಿಕೊಳ್ಳುವಂತೆ ಸಂಘವು ಒತ್ತಾಯಿಸಿದೆ. ಆದರೆ ವೈದ್ಯಕೀಯ ಕಾಲೇಜುಗಳನ್ನು ತೆರೆಯಲು ಅನುಕೂಲವಾಗುವ ದೃಷ್ಟಿಯಿಂದ ಕೆಲವು ಜಿಲ್ಲಾ ಆಸ್ಪತ್ರೆಗಳನ್ನು ವೈದ್ಯಕೀಯ ಶಿಕ್ಷಣ ಇಲಾಖೆಗೆ ವರ್ಗಾಯಿಸಲಾಗಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವರು ವಿವರಿಸಿದರು. ಅಂತೆಯೇ ಗುತ್ತಿಗೆ ವೈದ್ಯರ ವೇತನ ಪರಿಷ್ಕರಣೆ, ಬೇಡಿಕೆ ಆಧಾರಿತ ಔಷಧ ಪೂರೈಕೆಗೆ ಇಲಾಖೆ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘವು ತಮ್ಮ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ, ಸಾಮೂಹಿಕ ರಾಜೀನಾಮೆ ನೀಡುವುದಾಗಿ ತಿಳಿಸಿದ್ದಾರೆ. ಆದರೆ ಸಮಸ್ಯೆಗಳಿಗೆ ರಾಜೀನಾಮೆ ಪರಿಹಾರವಲ್ಲ. ಕುಳಿತು ಚರ್ಚೆ ನಡೆಸುವುದು ಸೂಕ್ತ ಎಂದು ಸಚಿವರು ಅಭಿಪ್ರಾಯಪಟ್ಟರು.

ಸ್ಪೀಕರ್ ಭೇಟಿ:

ಇದೇ ಸಂದರ್ಭದಲ್ಲಿ ಗುರುವಾರ ವಿಧಾನ ಸಭೆಯ ಸ್ಪೀಕರ್ ಅವರೊಂದಿಗೆ ಇಲಾಖೆಯ ಕಾರ್ಯ ಚಟುವಟಿಕೆಗಳ ಕುರಿತು ಮಾಹಿತಿ ನೀಡಲಾಗಿದ್ದು, ಅವರು ಇಲಾಖೆಯ ಸುಧಾರಣೆಗೆ ನೀಡಿದ ಸಲಹೆಗಳ ಅನುಷ್ಠಾನಕ್ಕೆ ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ನೇಮಕ ಪ್ರಕ್ರಿಯೆ ಆರಂಭ:

ಇಲಾಖೆಯಲ್ಲಿ ಕೈಗೊಳ್ಳಲಾದ ಸುಧಾರಣಾ ಕ್ರಮಗಳನ್ನು ವಿವರಿಸಿದ ಸಚಿವ ಶ್ರೀ ಖಾದರ್, ಹೈದರಾಬಾದ್ ಕರ್ನಾಟಕದ ಮೀಸಲಾತಿ ನಿಗದಿ ಪ್ರಕ್ರಿಯೆಯಿಂದಾಗಿ ವೈದ್ಯರು, ಅರೆವೈದ್ಯಕೀಯ ಸಿಬ್ಬಂದಿ ನೇಮಕ ನಡೆಸಲು ಸಾಧ್ಯವಾಗಿರಲಿಲ್ಲ. ಅದರಲ್ಲಿ ಗುಂಪು ಎ ಮತ್ತು ಬಿ ಯ ವೈದ್ಯರ ನೇಮಕಕ್ಕೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪತ್ರ ಬರೆಯಲಾಗಿದೆ. ಉಳಿದಂತೆ ಇಲಾಖೆಯಲ್ಲಿ ನೇಮಕಾತಿ ಸಮಿತಿ ರಚನೆಗೆ ಕ್ರಮ ಕೈಗೊಳ್ಳಲಾಗಿದೆ. ಒಟ್ಟಾರೆಯಾಗಿ ಇಲಾಖೆಯಲ್ಲಿ 983 ತಜ್ಞ ವೈದ್ಯರು ಹಾಗೂ 2118 ಅರೆ ವೈದ್ಯಕೀಯ

ಸಿಬ್ಬಂದಿ, 331 ಎಂಬಿಬಿಎಸ್ ವೈದ್ಯರು, 87 ದಂತ ವೈದ್ಯರು, 318 ಚಾಲಕರನ್ನು ನೇಮಕ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ವೈದ್ಯಾಧಿಕಾರಿಗಳ ವೇತನ ಪರಿಷ್ಕರಣೆ:

ವೈದ್ಯಾಧಿಕಾರಿಗಳ ವೇತನ ಪರಿಷ್ಕರಣೆಗೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆ ಹಾಗೂ ಸಚಿವ ಸಂಪುಟ ಒಪ್ಪಿಗೆಯನ್ನು ನಿರೀಕ್ಷಿಸಲಾಗುತ್ತಿದೆ. ಇದರಿಂದ ಎಂಬಿಬಿಎಸ್ ವೈದ್ಯರ ವೇತನ 75,768 ರೂ.ಗಳಿಗೆ ಹಾಗೂ ತಜ್ಞ ವೈದ್ಯರ ವೇತನ 93,853 ರೂ.ಗಳ ವರೆಗೆ ಹೆಚ್ಚಳವಾಗಲಿದೆ. ಇದು ವೈದ್ಯಕೀಯ ಕಾಲೇಜುಗಳ ವೈದ್ಯರ ವೇತನದಷ್ಟೇ ಅಥವಾ ಸ್ವಲ್ಪ ಹೆಚ್ಚೇ ಆಗುವುದು ಎಂದು ಸಚಿವರು ವಿವರಿಸಿದರು.

ಜನೌಷಧಿ ಮಳಿಗೆಗಳು:

ಔಷಧ ಕೊರತೆಯನ್ನು ನೀಗಿಸಲು ಬೇಡಿಕೆ ಆಧಾರಿತ ಔಷಧ ಪೂರೈಕೆಗೆ ಇಲಾಖೆ ಕ್ರಮ ಕೈಗೊಳ್ಳುತ್ತಿದೆ. ಅಲ್ಲದೆ ಸರ್ಕಾರಿ ಆಸ್ಪತ್ರೆಗಳಲ್ಲಿ ಹೊರಗಿನ ಔಷಧಿ ಅಂಗಡಿಗಳಿಂದ ಔಷಧ ಖರೀದಿಸುವಂತೆ ಸೂಚಿಸುವ ಸಂದರ್ಭಗಳೆದುರಾದರೆ, ಜಿಲ್ಲಾ ಆಸ್ಪತ್ರೆಗಳ ಹಾಗೂ ತಾಲ್ಲೂಕು ಆಸ್ಪತ್ರೆಗಳ ಸಮೀಪ ಭಾರತ ಸರ್ಕಾರದ ಸ್ವಾಮ್ಯದ ಹಿಂದೂಸ್ತಾನ್ ಲ್ಯಾಟೆಕ್ಸ್ ಲಿ. ಸಂಸ್ಥೆಯ ಮೂಲಕ ಹಂತ ಹಂತವಾಗಿ ಜನೌಷಧ ಮಳಿಗೆಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರಿಂದ ಬಡ ರೋಗಿಗಳಿಗೆ ಕಡಿಮೆ ದರದಲ್ಲಿ ಔಷಧ ಒದಗಿಸಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಆರೋಗ್ಯ ಮತ್ತು ಕುಟುಂಬ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಎನ್. ಶಿವಶೈಲಂ. ಆಯುಕ್ತ ಶ್ರೀ ಪಿ.ಎಸ್. ವಸ್ತ್ರದ ಹಾಗೂ ನಿರ್ದೇಶಕ ಡಾ. ರಮೇಶ್ ಅವರು ಉಪಸ್ಥಿತರಿದ್ದರು.